# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| 1. | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : 676 |
| 2. | ಮಾನ್ಯ ಸದಸ್ಯರ ಹೆಸರು | : ಶ್ರೀ ರಘುನಾಥ್ ರಾವ್ ಮಲ್ಕಾಪೂರೆ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3. | ಉತ್ತರಿಸುವ ದಿನಾಂಕ | : 04-3-2021 |
| 4. | ಉತ್ತರಿಸುವ ಸಚಿವರು | : ಗೃಹ, ಕಾನೂನು, ಸಂಸದೀಯ ವ್ಯವಹಾರಗಳು ಮತ್ತು ಶಾಸನ ರಚನೆ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| (ಅ) | ಬೀದರ ಜಿಲ್ಲೆಯಲ್ಲಿ ನೂತನವಾಗಿ ಸಂಚಾರಿ ಪೊಲೀಸ್ ಠಾಣೆಗಳನ್ನು (Traffic police station) ಸ್ಥಾಪಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಬೀದರ್ ಜಿಲ್ಲೆಯಲ್ಲಿ ನೂತನವಾಗಿ ಸಂಚಾರಿ ಪೊಲೀಸ್ ಠಾಣೆಯನ್ನು ಸ್ಥಾಪಿಸುವ ಪ್ರಸ್ತಾವನೆ ಇರುವುದಿಲ್ಲ. |
| (ಆ) | ಬೀದರ ನಗರದಲ್ಲಿ ಪ್ರಸ್ತುತ ಇರುವ ಜಿಲ್ಲಾ ಕೇಂದ್ರ ಕಾರಾಗೃಹವನ್ನು ನಗರದ ಹೂ ಪ್ರದೇಶಕ್ಕೆ ಸ್ಥಳಾಂತರಿಸಲು ಸರ್ಕಾರ ತೆಗೆದುಕೊಂಡ ಕ್ರಮಗಳೇನು; | ಬೀದರ್ ನಗರದ ಹೊರ ವಲಯದಲ್ಲಿ ರೂ. 9995.42 ಲಕ್ಷಗಳ ವೆಚ್ಚದಲ್ಲಿ ನೂತನ ಕೇಂದ್ರ ಕಾರಾಗೃಹವನ್ನು ಕರ್ನಾಟಕ ರಾಜ್ಯ ಪೊಲೀಸ್ ವಸತಿ ಮತ್ತು ಮೂಲಭೂತ ಸೌಲಭ್ಯ ಅಭಿವೃದ್ಧಿ ನಿಗಮ (ನಿ) ರವರ ಮೂಲಕ ನಿರ್ಮಾಣ ಮಾಡಲು ಆಡಳಿತಾತ್ಮಕ ಮಂಜೂರಾತಿ ನೀಡಿದ್ದು, ಪ್ರಸ್ತುತ ಟೆಂಡರ್ ಪ್ರಕ್ರಿಯೆ ಪೂರ್ಣಗೊಂಡು ಕಾಮಗಾರಿಯನ್ನು ಪ್ರಾರಂಭಿಸಲು ಅಗತ್ಯ ಕ್ರಮ ಕೈಗೊಳ್ಳಲಾಗುತ್ತಿದೆ. |
| (ಇ) | ಬೀದರ ಜಿಲ್ಲೆಯಲ್ಲಿ ಪೊಲೀಸ್ ಸಿಬ್ಬಂದಿಗಳಿಗೆ ವಸತಿಗೃಹಗಳನ್ನು ನಿರ್ಮಾಣ ಮಾಡಲು ಸರ್ಕಾರ ತೆಗೆದುಕೊಂಡ ಮಹತ್ವದ ಕ್ರಮಗಳೇನು; (ಮಾಹಿತಿ ನೀಡುವುದು) | ಬೀದರ್ ಜಿಲ್ಲೆಗೆ ಪೊಲೀಸ್ ಗೃಹ 2020 ಯೋಜನೆಯಡಿಯಲ್ಲಿ ಪೊಲೀಸ್ ಸಿಬ್ಬಂದಿ ಹಾಗೂ ಅಧಿಕಾರಿಗಳಿಗೆ ಒಟ್ಟು 260 ವಸತಿ ಗೃಹಗಳು ಮಂಜೂರು ಆಗಿ ನಿರ್ಮಾಣಗೊಂಡಿದ್ದು, ಸದರಿ ವಸತಿ ಗೃಹಗಳಲ್ಲಿ ಈಗಾಗಲೇ ಪೊಲೀಸ್ ಅಧಿಕಾರಿ ಮತ್ತು ಸಿಬ್ಬಂದಿಗಳು ವಾಸ ಮಾಡುತ್ತಿದ್ದಾರೆ.<br><br>ಪೊಲೀಸ್ ಗೃಹ 2025 ಯೋಜನೆಯಡಿ ಮುಂದಿನ 5 ವರ್ಷಗಳಲ್ಲಿ ಹೊಸದಾಗಿ 10034 ವಸತಿ ಗೃಹಗಳನ್ನು ನಿರ್ಮಾಣ ಮಾಡುವ ಪ್ರಸ್ತಾವನೆಗೆ ಸರ್ಕಾರವು ಆಡಳಿತಾತ್ಮಕ ಅನುಮೋದನೆ ನೀಡಿದ್ದು, ಸದರಿ ಪ್ರಸ್ತಾವನೆಯನ್ನು ಸಹ ಈ ಯೋಜನೆ ಅಡಿಯಲ್ಲಿ ಪರಿಗಣಿಸಲಾಗುವುದು. |

**ಸಂಖ್ಯೆ:ಹೆಚ್‌ಡಿ 37 ಪಿಓಪಿ 2021**

(ಬಸವರಾಜ ಬೊಮ್ಮಾಯಿ)
ಗೃಹ ಮತ್ತು ಕಾನೂನು, ಸಂಸದೀಯ ವ್ಯವಹಾರಗಳು
ಹಾಗೂ ಶಾಸನ ರಚನಾ ಸಚಿವರು